**ಕರ್ನಾಟಕ ಸರ್ಕಾರ**

**ಕಂದಾಯ ಇಲಾಖೆ**

**ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾದಂಡಾಧಿಕಾರಿಗಳ ಕಾರ್ಯಾಲಯ, ಚಿತ್ರದುರ್ಗ ಜಿಲ್ಲೆ**

---

**ವಿಷಯ :** ಗ್ರಾಮ ಪಂಚಾಯತಿ ಸಾರ್ವತ್ರಿಕ ಚುನಾವಣೆ-2020 ರ ಸಂಬಂದ ಮತ ಎಣಿಕೆ ಪ್ರಯುಕ್ತ ಮದ್ಯ ವಹಿವಾಟಿನ ಒಣ ದಿನಗಳನ್ನು ಘೋಷಿಸುವ ಬಗ್ಗೆ.

**ಉಲ್ಲೇಖ :** ಕಾರ್ಯದರ್ಶಿಗಳು, ರಾಜ್ಯ ಚುನಾವಣಾ ಆಯೋಗ, ಬೆಂಗಳೂರು ಇವರ ಆದೇಶ ಸಂ. ರಾಚುಆ 134 ಇ.ಜಿ.ಪಿ 2020 ದಿ.01-12-2020.

$$$$$$$

**ಪ್ರಸ್ತಾವನೆ :-**

ಉಲ್ಲೇಖಿತ ಪತ್ರದಲ್ಲಿ ಮಾನ್ಯ ಆಯುಕ್ತರು, ರಾಜ್ಯ ಚುನಾವಣಾ ಆಯೋಗ ಬೆಂಗಳೂರು ರವರು ಗ್ರಾಮ ಪಂಚಾಯತಿ ಸಾರ್ವತ್ರಿಕ ಚುನಾವಣೆ-2020 ರ ಸಂಬಂದ ಚುನಾವಣಾ ವೇಳಾಪಟ್ಟಿಯನ್ನು ಪ್ರಕಟಿಸಲಾಗಿರುತ್ತದೆ.

ಚುನಾವಣಾ ವೇಳಾಪಟ್ಟಿಯನ್ವಯ ದಿನಾಂಕ:30-12-2020 ರಂದು ಮತ ಎಣಿಕೆ ಕಾರ್ಯ ನಡೆಯಲಿದ್ದು, ಮತ ಎಣಿಕೆ ಕಾರ್ಯ ಮುಕ್ತ, ಶಾಂತಿಯುತ, ನಿಷ್ಪಕ್ಷಪಾತ ಹಾಗೂ ಸುಸೂತ್ರವಾಗಿ ನಡೆಯಬೇಕೆಂಬ ಉದ್ದೇಶದಿಂದ ಕಾನೂನಿನನ್ವಯ ಮತ ಎಣಿಕೆ ದಿನಾಂಕದಂದು ಒಣ ದಿನವನ್ನಾಗಿ ಘೋಷಿಸುವ ಅವಶ್ಯಕತೆ ಇರುತ್ತದೆ.

ಪ್ರಯುಕ್ತ ಮಧ್ಯಪಾನ ನಿಷೇದವನ್ನು ಮತ ಎಣಿಕೆ ಹಿಂದಿನ ದಿನ ಸಂಜೆ 7-00 ಗಂಟೆಯಿಂದ ಮತ ಎಣಿಕೆ ದಿನ ಸಂಜೆ 7-00 ಗಂಟೆಯವರೆಗೆ ಪಾನ ನಿರೋದ ದಿನ ಘೋಷಿಸುವಂತೆ ನಿರ್ದೇಶಿಸಿರುವುದರಿಂದ ಈ ಕೆಳಕಂಡಂತೆ ಆದೇಶ ಮಾಡಲಾಗಿದೆ.

## ಆದೇಶ

**ನಂ.ಎಂಎಜಿ.ಚುನಾವಣೆ.ಸಿಆರ್- 39 /2020-21** **ದಿನಾಂಕ. 24-12-2020**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಭಾ.ಆ.ಸೇ., ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ, ಚಿತ್ರದುರ್ಗ ಜಿಲ್ಲೆ ಆದ ನಾನು ಪ್ರಜಾ ಪ್ರಾತಿನಿಧ್ಯ ಕಾಯ್ದೆ 1951ರ ನಿಯಮ 135 ಅಡಿಯಲ್ಲಿ ದತ್ತವಾದ ಅಧಿಕಾರವನ್ನು ಚಲಾಯಿಸುತ್ತಾ, ದಿ.29-12-2020 ರ ಸಂಜೆ 7-00 ಗಂಟೆಯಿಂದ ದಿ.31-12-2020 ರ ಮಧ್ಯಾಹ್ನ 4-00 ಗಂಟೆವರೆಗೆ, ಚಿತ್ರದುರ್ಗ ಜಿಲ್ಲೆಯಾದ್ಯಂತ ಎಲ್ಲಾ ಬಗೆಯ ಮದ್ಯದ ಅಂಗಡಿಗಳನ್ನು ಮುಚ್ಚಲು ಹಾಗೂ ಯಾವುದೇ ತರಹದ ಬಾರ್ ಅಂಡ್ ರೆಸ್ಟೋರೆಂಟ್, ಕ್ಲಬ್ ಮತ್ತು ಹೋಟಲ್/ಡಾಬಾ ಗಳಲ್ಲಿ ಮದ್ಯ ಸಾಗಾಣಿಕೆ, ಶೇಖರಣೆ ಮತ್ತು ಮದ್ಯ ಮಾರಾಟ ಮಾಡುವುದನ್ನು ನಿಷೇಧಿಸಿ ಆದೇಶಿಸಿರುತ್ತೇನೆ.

ಈ ಆದೇಶವನ್ನು ದಿ.24-12-2020 ರಂದು ನನ್ನ ಸಹಿ ಮತ್ತು ಕಚೇರಿ ಮುದ್ರೆಯೊಂದಿಗೆ ಹೊರಡಿಸಲಾಗಿದೆ.

(ಕವಿತಾ ಎಸ್. ಮನ್ನಿಕೇರಿ)
ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳು,
ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

**ಪ್ರತಿಯನ್ನು :-**

1. ಆಯುಕ್ತರು, ರಾಜ್ಯ ಚುನಾವಣಾ ಆಯೋಗ, ಕರ್ನಾಟಕ ರಾಜ್ಯ ಸಹಕಾರ ಮಂಡಳಿ ಕಟ್ಟಡ (ಹಿಂಭಾಗ), 1 ನೇ ಮಹಡಿ, ನಂ:8, ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಅಬಕಾರಿ ಆಯುಕ್ತರು ಕರ್ನಾಟಕ ರಾಜ್ಯ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
3. ಅಬಕಾರಿ ಜಂಟಿ ಆಯುಕ್ತರು (ಜಾರಿ ಮತ್ತು ತನಿಖೆ) ಹೊಸಪೇಟೆ ವಿಭಾಗ ಹಾಗೂ ಅಬಕಾರಿ ಜಂಟಿ ಆಯುಕ್ತರು ರಾಜ್ಯ ವಿಚಕ್ಷಣ ದಳ, ಬೆಂಗಳೂರು ಇವರ ಮಾಹಿತಿಗಾಗಿ ಸಲ್ಲಿಸಿದೆ.
4. ಅಬಕಾರಿ ಉಪ ಆಯುಕ್ತರು, ಚಿತ್ರದುರ್ಗ ಜಿಲ್ಲೆ ಇವರಿಗೆ ಅಗತ್ಯ ಕ್ರಮಕ್ಕಾಗಿ ಹಾಗೂ ಕಟ್ಟುನಿಟ್ಟಿನ ಕ್ರಮಕ್ಕಾಗಿ ರವಾನಿಸಲಾಗಿದೆ.
5. ಜಿಲ್ಲಾಧಿಕಾರಿಗಳು, ದಾವಣಗೆರೆ ಜಿಲ್ಲೆ.
6. ಆರಕ್ಷಕ ಅಧೀಕ್ಷಕರು, ಚಿತ್ರದುರ್ಗ/ದಾವಣಗೆರೆ ಇವರ ಅಗತ್ಯ ಕ್ರಮಕ್ಕಾಗಿ ರವಾನಿಸಿದೆ.
7. ವಾರ್ತಾ ಮತ್ತು ಪ್ರಚಾರಾಧಿಕಾರಿಗಳು, ಚಿತ್ರದುರ್ಗ ಇವರಿಗೆ ಮಾಹಿತಿ ಮತ್ತು ಸೂಕ್ತ ಪ್ರಕಟಣೆಗಾಗಿ.
8. ಚಿತ್ರದುರ್ಗ ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ತಹಶೀಲ್ದಾರರುಗಳಿಗೆ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.



Scanned with CamScanner